ರಫ್ತು (ಹಣ್ಣು ಬೆಳೆಗಳು)

2000-01ನೇ ಸಾಲಿನಲ್ಲಿ ಅಥಣಿ ಪ್ರದೇಶದಲ್ಲಿ ಬೆಳೆದ ಸುಮಾರು 30 ಲಕ್ಷ ರೂ. ಮೌಲ್ಯದ ದ್ರಾಕ್ಷಿಯನ್ನು ರಫ್ತು ಮಾಡಲಾಗಿದೆ.

ರಾಜ್ಯದಲ್ಲಿ ಎ.ಪಿ.ಎಂ.ಸಿ. ಯಾರ್ಡ್‌ಗಳಲ್ಲಿ ರೈತ ಬಜಾರ್

1422 (1757) - ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) (ಸಾಸನೂರು): ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ರಾಜ್ಯದಲ್ಲಿ ಯಾವ ಯಾವ ಸ್ಥಳಗಳ ಎ.ಪಿ.ಎಂ.ಸಿ. ಯಾರ್ಡ್ ಗಳಲ್ಲಿ ರೈತ ಬಜಾರ್ ಪ್ರಾರಂಭ ಮಾಡಬೇಕೆಂದು ತೀರ್ಮಾನಿಸಲಾಗಿದೆ.

2. ರೈತ ಬಜಾರ್ ಪ್ರಾರಂಭ ಮಾಡುವುದರಿಂದ ರೈತರಿಗೆ ಆಗುವ ಲಾಭಗಳಾವುವು.

3. ಬೆಳಗಾವಿಯ ಎ.ಪಿ.ಎಂ.ಸಿ. ಯಾರ್ಡ್ ದಲ್ಲಿ ರೈತ ಬಜಾರ್ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಬಿ.ಎಸ್. ಪಾಟೀಲ್ (ಸಾಸನೂರು), (ಕೃಷಿ ಮಾರುಕಟ್ಟೆ ಸಚಿವರು):

1. ರಾಜ್ಯದಲ್ಲಿ ಪ್ರಾಯೋಗಿಕವಾಗಿ ರೈತರ ಸಂತೆಗಳನ್ನು ಬೆಂಗಳೂರು ಮತ್ತು ಹುಬ್ಬಳ್ಳಿಯಲ್ಲಿ ಸ್ಥಾಪಿಸಲು ತೀರ್ಮಾನಿಸಲಾಗಿದೆ.

2. ರೈತರು ತಾವು ಬೆಳೆದ ಹಣ್ಣು ತರಕಾರಿಗಳನ್ನು ಮಧ್ಯವರ್ತಿಗಳ ಸಹಾಯವಿಲ್ಲದೆ ನೇರವಾಗಿ ಗ್ರಾಹಕರಿಗೆ ಮಾರಾಟ ಮಾಡುತ್ತಾರೆ. ಮಾರಾಟ ಬೆಲೆಯನ್ನು ಮೊದಲೇ ನಿಗದಿಪಡಿಸುವುದರಿಂದ ರೈತರಿಗೆ ನ್ಯಾಯವಾದ ಬೆಲೆ ಹಾಗೂ ಗ್ರಾಹಕರಿಗೆ ಸಮಂಜಸವಾದ ಬೆಲೆಯಲ್ಲಿ ಹಣ್ಣು ಮತ್ತು ತರಕಾರಿ ದೊರೆಯಲು ಸಾಧ್ಯವಾಗುತ್ತದೆ. ರೈತರಿಗೆ ಮಾರಾಟ ಕುಶಲತೆ ವೃದ್ಧಿಯಾಗುತ್ತದೆ. ಗ್ರಾಹಕರ ಬೇಡಿಕೆಗೆ ಅನುಸಾರವಾಗಿ ರೈತರು ಬೆಳೆಗಳನ್ನು ಬೆಳೆಯಲು ಸಾಧ್ಯವಾಗುತ್ತದೆ.

3. ಸದ್ಯಕ್ಕೆ ಇಲ್ಲ.

ಬೆಳಗಾವಿ ಜಿಲ್ಲೆಯಲ್ಲಿ ಬೆಳೆ ವಿಮೆ ಮಾಡಿದ ರೈತರಿಗೆ ವಿಮಾ ಹಣ ಪಾವತಿ

1423 (1758) - ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ): ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಕಳೆದ ವರ್ಷದ ಮುಂಗಾರು ಮತ್ತು ಹಿಂಗಾರು ಬೆಳೆಗಳಿಗೆ ರಾಜ್ಯದಲ್ಲಿ ಎಷ್ಟು ಎಕರೆ ಪ್ರದೇಶಕ್ಕೆ ಬೆಳೆ ವಿಮೆಯನ್ನು ಮಾಡಲಾಗಿದೆ;

2) ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಎಕರೆ ಪ್ರದೇಶಕ್ಕೆ ಮುಂಗಾರು ಹಾಗೂ ಹಿಂಗಾರು ಬೆಳೆಗಳಿಗೆ ಬೆಳೆ ವಿಮೆಯನ್ನು ಮಾಡಲಾಗಿದೆ;